# ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ

(ಕರ್ನಾಟಕ ಸರ್ಕಾರದ ಅಧೀನ ಸಂಸ್ಥೆ)

ನಂ. 49, 4 ಮತ್ತು 5ನೇ ಮಹಡಿ, 'ಈಸ್ಟ್ ವಿಂಗ್', ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು – 560 001.
ದೂರವಾಣಿ : 080–2226 5383 ವೆಬ್‌ಸೈಟ್ : www.kiadb.in ಇ–ಮೇಲ್ : ceoem@kiadb.in

ಸಂಖ್ಯೆ:ಕ.ಕೈ.ಪ್ರ.ಮಂ/ಕೇಂ.ಕ/ಆಡಳಿತ-63(3)/ 4519 /2025-26 ದಿನಾಂಕ: 03.06.2025

:: **ಸುತ್ತೋಲೆ** ::

ವಿಷಯ: ಮಂಡಳಿಯು ಕೈಗಾರಿಕಾ ಪ್ರದೇಶಗಳಲ್ಲಿ ಹಂಚಿಕೆ ಮಾಡಲಾದ ನಿವೇಶನ / ಏಕಘಟಕ ಸಂಕೀರ್ಣ ಯೋಜನೆಗಳಿಗಾಗಿ ಹಂಚಿಕೆ ಮಾಡಲಾದ ಜಮೀನುಗಳಲ್ಲಿ ಯೋಜನೆ ಅನುಷ್ಠಾನಗೊಳಿಸಿರುವ ಬಗ್ಗೆ ಪರಿಶೀಲಿಸಿ, ವರದಿ ಸಲ್ಲಿಸುವ ಕುರಿತು.

* * *

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು, ರಾಜ್ಯದಾದ್ಯಂತ ಸಾವಿರಾರು ಎಕರೆ ವಿಸ್ತೀರ್ಣದ ಜಮೀನನ್ನು ಕೈಗಾರಿಕಾ ಅಭಿವೃದ್ಧಿಗಾಗಿ ಭೂಸ್ವಾಧೀನಪಡಿಸಿಕೊಂಡು ಕೈಗಾರಿಕೆಗಳನ್ನು ಸ್ಥಾಪಿಸುವ ನಿಟ್ಟಿನಲ್ಲಿ ಉದ್ದಿಮೆದಾರರಿಗೆ ಆವಶ್ಯಕತೆಗಳಿಗೆ ಅನುಗುಣವಾಗಿ ಭೂಮಿಯನ್ನು ಹಂಚಿಕೆ ಮಾಡುತ್ತಾ ಬಂದಿರುತ್ತದೆ.

ಆದರೆ, ಕೆಲವು ಉದ್ದಿಮೆದಾರರು ಸಾಕಷ್ಟು ವರ್ಷಗಳಿಂದ ಹಂಚಿಕೆ ಪಡೆದ ಜಮೀನಿನಲ್ಲಿ ಗುತ್ತಿಗೆ ಕರಾರಿನ ನಿಯಮಾವಳಿಗಳ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸದೇ ಜಮೀನನ್ನು ಖಾಲಿ ಉಳಿಸಿರುವುದು ತಿಳಿದುಬಂದಿರುತ್ತದೆ.

ಆದುದರಿಂದ, ಎಲ್ಲಾ ಕಾರ್ಯಪಾಲಕ ಅಭಿಯಂತರರು ತಮ್ಮ ಕಾರ್ಯವ್ಯಾಪ್ತಿಗೆ ಒಳಪಡುವ ಕೈಗಾರಿಕಾ ಪ್ರದೇಶಗಳಲ್ಲಿ ಹಂಚಿಕೆ ಮಾಡಲಾದ ನಿವೇಶನ / ಏಕಘಟಕ ಸಂಕೀರ್ಣ ಯೋಜನೆಗಳಿಗಾಗಿ ಹಂಚಿಕೆ ಮಾಡಲಾದ ಜಮೀನುಗಳಲ್ಲಿ ಹಂಚಿಕೆ ನೀಡಲಾದ ಜಮೀನಿನ ಪೈಕಿ ನಿಗದಿತ ಕಾಲಾವಧಿಯೊಳಗಾಗಿ ಯೋಜನೆಯನ್ನು ಅನುಷ್ಠಾನಗೊಳಿಸದೇ ಇರುವ ಪ್ರಕರಣಗಳು ಮತ್ತು ಕಳೆದ 2 ವರ್ಷಗಳ ಅವಧಿಯಲ್ಲಿ ಕಾಲಾವಕಾಶ ವಿಸ್ತರಣೆ ಪಡೆದ ಪ್ರಕರಣಗಳ ಪ್ರಸ್ತುತ ವಸ್ತುಸ್ಥಿತಿಯನ್ನು ಪರಿಶೀಲಿಸಿ, ನಿಯಮಾನುಸಾರ ಮುಂದಿನ ಕ್ರಮ ಜರುಗಿಸಲು 30 ದಿವಸಗಳ ಒಳಗಾಗಿ ವರದಿ / ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದು.

ಮುಖ್ಯ ಕಾರ್ಯನಿರ್ವಹಣಾಧಿಕಾರಿ
ಹಾಗೂ ಕಾರ್ಯನಿರ್ವಾಹಕ ಸದಸ್ಯರು.

ಗೆ.

1. ಜಂಟಿ ನಿರ್ದೇಶಕರು, ಕೆಐಎಡಿಬಿ, ಕೇಂದ್ರ ಕಛೇರಿ, ಬೆಂಗಳೂರು.
2. ಕಾರ್ಯದರ್ಶಿಗಳು-1, ಕೆಐಎಡಿಬಿ, ಕೇಂದ್ರ ಕಛೇರಿ, ಬೆಂಗಳೂರು.
3. ಕಾರ್ಯದರ್ಶಿಗಳು-2, ಕೆಐಎಡಿಬಿ, ಕೇಂದ್ರ ಕಛೇರಿ, ಬೆಂಗಳೂರು.
4. ಕಾರ್ಯದರ್ಶಿಗಳು-3, ಕೆಐಎಡಿಬಿ, ಕೇಂದ್ರ ಕಛೇರಿ, ಬೆಂಗಳೂರು

. . . . 2